ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) -

80(711) ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸುಮಾರು 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇಮಕ ಮಾಡಲು ಸರ್ಕಾರ ನಿರ್ಧಾರ ಕೈಗೊಂಡಿದೆಯೇ; ಹಾಗಿದ್ದಲ್ಲಿ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದೆಯೇ;

(ಆ) ಈ ನೇಮಕಾತಿ ಮಾಡಿಕೊಳ್ಳುವಲ್ಲಿ ಹಲವಾರು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ? (ವಿವರ ನೀಡುವುದು)

(ಇ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2015ರ ಅಧಿಸೂಚನೆ ಮೇರೆಗೆ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಕಾಯ್ದಿರಿಸಿದ ಪಟ್ಟಿಯಲ್ಲಿ ಉಳಿದಿರುವ ಸುಮಾರು 44 ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಆದೇಶ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ?